ಇಂದು ದಿನಾಂಕಃ 13.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಪಾಟೀ ಸವಾಲುಃ** ಪ್ರತಿವಾದಿಯ ಪರ ಶ್ರೀ ಆರ್ ಬಿ ಕೆ ವಕೀಲರಿಂದಃ

ದಾವಾ ಆಸ್ತಿ ರಿ ಸ ನಂ. 11 ರ 14 ಎಕರೆ 5 ಗುಂಟೆ ಜಮೀನಿನಲ್ಲಿ ಯಾವ ಭಾಗಕ್ಕೆ ಬರುತ್ತದೆ ಎಂದು ತೋರಿಸಲು ನಾನು ನಕಾಶೆಯನ್ನು ಹಾಜರಪಡಿಸಿರುವುದಿಲ್ಲ. ಸಾಕ್ಷಿಗೆ ಸರ್ವೆನಂ. 11 ರ ಕೆ.ಡಿ.ಟಿ. ಪಾರಂ ಹಾಗೂ ನಕಾಶೆಯನ್ನು ತೋರಿಸಿದ್ದು ಸದರಿ ದಾಖಲೆಗಳ ಪ್ರಕಾರ ಸರ್ವೆ ನಂ.11 ರ 14 ಎಕರೆ 5 ಗುಂಟೆ ಜಮೀನು ಇದಿದ್ದು ಈವರಗೊ ಯಾವುದೇ ಪೋಡಿಯಾಗಿರುವುದಿಲ್ಲ ಎಂದರೆ ಸರಿ. ಸದರಿ ದಾಖಲೆಗಳನ್ನು ಸಾಕ್ಷಿ ಒಪ್ಪಿದ ಮೇರೆಗೆ ಅವುಗಳನ್ನು ನಿಡಿ-1 ಮತ್ತು 2 ಎಂದು ಗುರುತಿಸಲಾಯಿತು. 1 ನೇ ಪ್ರತಿವಾದಿ ನನ್ನ ಅಣ್ಣನ ವಿರುದ್ಧ ಅಸಲು ದಾವಾ ಸಂಖ್ಯೆ 254/2013 ರಂತೆ ದಾವೆಯಲ್ಲಿ ಸಾಕ್ಷಿ ನುಡಿದಿದ್ದು, ಆ ದ್ವೇಷದಿಂದ ನಾನು ಈ ದಾವೆಯನ್ನು ಹೂಡಿರುತ್ತೇನೆ ಎಂದರೆ ಸರಿಯಲ್ಲ.

2. ಟಾಕ್ರಪ್ಪ, ತಾವರೆಪ್ಪ ಮತ್ತು ನೇಮಪ್ಪ ಈರಪ್ಪ ಲಮಾಣಿ ರವರು ತೀರಿಕೊಂಡಿರುತ್ತಾರೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ನೇಮಪ್ಪ ತಂದೆಯ ಹೆಸರು ಉರ್ಫ ಹುಚ್ಚಪ್ಪ ಎಂದು ಕರೆಯುತ್ತಾರೆ ಎಂದು ನುಡಿದಿರುತ್ತಾರೆ. ದಾವೆಯೊಂದಿಗೆ ಇರುವ ಶೆಡ್ಯೂಲ್ ವಂಶವೃಕ್ಷವನ್ನು ನಾನು ಹಾಜರಪಡಿಸಿರುವುದಿಲ್ಲ.

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗಾಗಿ ಕಾಲವಕಾಶವನ್ನು ಕೋರಿದ್ದು ಅದರಂತೆ ಮೂಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಪ್ರಧಾನ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.